**All India Radio: Bangalore**
**National Bulletin In Kannada**
**26.07.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.07.2026  1.10 p.m.**

**<><><><>**

ಮುಖ್ಯಾಂಶಗಳು

1. ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ ದಿವಸ್ ಆಚರಣೆ; ರಾಷ್ಟ್ರಪತಿ ಸೇರಿದಂತೆ ಗಣ್ಯರಿಂದ ವೀರ ಯೋಧರಿಗೆ ಗೌರವ ನಮನ
2. ಮುಂಬರುವ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ 'ಹರ್ ಘರ್ ತಿರಂಗಾ' ಅಭಿಯಾನದಲ್ಲಿ ದೇಶದ ಜನತೆ ಉತ್ಸಾಹದಿಂದ ಪಾಲ್ಗೊಳ್ಳುವಂತೆ ಪ್ರಧಾನಿ ಕರೆ
3. 'ಕ್ಯಾಚ್ ದಿ ರೇನ್' ಅಭಿಯಾನಕ್ಕೆ ದೇಶಾದ್ಯಂತ ಉತ್ತಮ ಸ್ಪಂದನೆ; ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಮೋದಿ ಸಂತಸ
4. ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿ ಭೂಕುಸಿತ ತೆರವು; ಅಮರನಾಥ ಯಾತ್ರೆ ಪುನರಾರಂಭ

<><><><>

೧೯೯೯ರ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಭಾರತೀಯ ಯೋಧರ ಶೌರ್ಯ ಮತ್ತು ತ್ಯಾಗವನ್ನು ಸ್ಮರಿಸಲು ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಗುತ್ತಿದೆ. ಈ ದಿನವು ಕಾರ್ಗಿಲ್ ಯುದ್ಧದಲ್ಲಿ ಪಾಕಿಸ್ತಾನದ ವಿರುದ್ಧ ಭಾರತ ಸಾಧಿಸಿದ ವಿಜಯದ ೨೭ನೇ ವಾರ್ಷಿಕೋತ್ಸವ ಹಾಗೂ ಆಪರೇಷನ್ ವಿಜಯ್ ಯಶಸ್ವಿಯಾಗಿ ಪೂರ್ಣಗೊಂಡ ದಿನದ ಸ್ಮರಣಾರ್ಥ ಆಚರಿಸಲಾಗುತ್ತಿದೆ. ಆ ಕಾರ್ಯಾಚರಣೆಯಲ್ಲಿ ಭಾರತೀಯ ಸಶಸ್ತ್ರ ಪಡೆಗಳು ಜಮ್ಮು-ಕಾಶ್ಮೀರದ ಕಾರ್ಗಿಲ್ ಪ್ರದೇಶದಲ್ಲಿ ಪಾಕಿಸ್ತಾನದ ಸೈನಿಕರು ಹಾಗೂ ಉಗ್ರರು ಅತಿಕ್ರಮಿಸಿಕೊಂಡಿದ್ದ ಪ್ರದೇಶಗಳನ್ನು ಮರಳಿ ವಶಪಡಿಸಿಕೊಂಡಿದ್ದವು. ಲಡಾಖ್‌ನ ದ್ರಾಸ್‌ನಲ್ಲಿರುವ ಪ್ರಸಿದ್ಧ ಕಾರ್ಗಿಲ್ ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, 'ಶೌರ್ಯ ಸಂಧ್ಯಾ' ಕಾರ್ಯಕ್ರಮದಲ್ಲಿ ಭಾಗವಹಿಸಿ, ವೀರ ಯೋಧರ ತ್ಯಾಗ ಮತ್ತು ಬಲಿದಾನಗಳನ್ನು ಸ್ಮರಿಸಿ ಶ್ರದ್ಧಾಂಜಲಿ ಸಲ್ಲಿಸಿದರು. ಕಾರ್ಗಿಲ್ ವಿಜಯ್ ದಿವಸ್ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹಾಗೂ

ಪ್ರಧಾನಮಂತ್ರಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಹಲವು ಗಣ್ಯರು, ಮಾತೃಭೂಮಿಯ ರಕ್ಷಣೆಗಾಗಿ ಪ್ರಾಣಾರ್ಪಣೆ ಮಾಡಿದ ವೀರ ಯೋಧರಿಗೆ ಗೌರವ ನಮನ ಸಲ್ಲಿಸಿದ್ದಾರೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಜನಪ್ರಿಯ 'ಮನ್ ಕಿ ಬಾತ್'ನಲ್ಲಿ ಮೊದಲಿಗೆ 'ಕಾರ್ಗಿಲ್ ವಿಜಯ ದಿವಸದ' ಅಂಗವಾಗಿ ದೇಶದ ವೀರ ಯೋಧರಿಗೆ ಭಾವಪೂರ್ಣ ನಮನ ಸಲ್ಲಿಸಿದರು. ಕಾರ್ಗಿಲ್ ಯುದ್ಧದಲ್ಲಿ ಭಾರತೀಯ ಸೈನಿಕರು ಪ್ರತಿಕೂಲ ಹವಾಮಾನ, ದುರ್ಗಮ ಪರ್ವತ ಪ್ರದೇಶ ಹಾಗೂ ಶತ್ರುಗಳ ಸವಾಲುಗಳನ್ನು ಧೈರ್ಯದಿಂದ ಎದುರಿಸಿ ದೇಶದ ಸಾರ್ವಭೌಮತ್ವವನ್ನು ಕಾಪಾಡಿದ ತ್ಯಾಗವನ್ನು ಸ್ಮರಿಸಿದ ಪ್ರಧಾನಿ, ಅವರ ಶೌರ್ಯ ದೇಶಕ್ಕೆ ಸದಾ ಸ್ಫೂರ್ತಿಯಾಗಿದೆ ಎಂದು ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೯ ಸೆಕೆಂಡ್ಸ್) ಕಾರ್ಗಿಲ್

ಈ ವರ್ಷ 'ಶೌರ್ಯ ವಿಜಯ ಯಾತ್ರೆ' ಯನ್ನು ಆಯೋಜಿಸಿರುವುದಾಗಿ ತಿಳಿಸಿದ ಅವರು, ಜುಲೈ ೧೪ರಂದು ದೆಹಲಿಯ ರಾಷ್ಟ್ರೀಯ ಯುದ್ಧ ಸ್ಮಾರಕದಿಂದ ಆರಂಭವಾದ ಈ ಮೋಟಾರ್ ಸೈಕಲ್ ಯಾತ್ರೆ ದ್ರಾಸ್‌ನ ಕಾರ್ಗಿಲ್ ಯುದ್ಧ ಸ್ಮಾರಕವನ್ನು ತಲುಪಲಿದ್ದು, ಒನ್ ರೈಡ್, ಒನ್ ನೇಷನ್, ಒನ್ ಸಲ್ಯೂಟ್ ಎಂಬ ಸಂದೇಶದ ಮೂಲಕ ಯುವಜನತೆಯಲ್ಲಿ ರಾಷ್ಟ್ರಭಕ್ತಿ ಮೂಡಿಸುತ್ತಿದೆ ಎಂದು ಹೇಳಿದರು. ಭಾರತವು ಸೈನಿಕರ ಶೌರ್ಯದ ಜೊತೆಗೆ ರಕ್ಷಣಾ ತಂತ್ರಜ್ಞಾನದಲ್ಲಿಯೂ ಗಮನಾರ್ಹ ಸಾಧನೆ ಮಾಡುತ್ತಿದೆ. ಸಂಪೂರ್ಣವಾಗಿ ಭಾರತದಲ್ಲಿಯೇ ವಿನ್ಯಾಸಗೊಳಿಸಿ ನಿರ್ಮಿಸಲಾದ ಐಎನ್‌ಎಸ್ ಮಹೇಂದ್ರಗಿರಿ ಯುದ್ಧನೌಕೆಯನ್ನು ಭಾರತೀಯ ನೌಕಾಪಡೆಗೆ ಸೇರ್ಪಡೆಗೊಳಿಸಿರುವುದು ಆತ್ಮನಿರ್ಭರ ಭಾರತದ ಬೆಳವಣಿಗೆಗೆ ಸಾಕ್ಷಿಯಾಗಿದೆ ಎಂದರು. ಈ ಯುದ್ಧನೌಕೆಯಲ್ಲಿ ಶೇಕಡ ೭೫ಕ್ಕೂ ಹೆಚ್ಚು ಸ್ವದೇಶಿ ವಸ್ತುಗಳನ್ನು ಬಳಸಲಾಗಿದೆ ಎಂದು ಅವರು ಮಾಹಿತಿ ಹಂಚಿಕೊಂಡರು. ಡಿಆರ್‌ಡಿಒ ಅಭಿವೃದ್ಧಿಪಡಿಸಿರುವ ಪಿನಾಕಾ ಲಾಂಗ್ ರೇಂಜ್ ಗೈಡೆಡ್ ರಾಕೆಟ್ ಹಾಗೂ ಕುಶಾ ಕ್ಷಿಪಣಿಗಳ ಯಶಸ್ವಿ ಪರೀಕ್ಷೆಯನ್ನು ಪ್ರಧಾನಿ ಅಭಿನಂದಿಸಿದರು. ತಮ್ಮ ಈ ಹಿಂದಿನ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಸ್ತಾಪಿಸಿದ್ದ 'ಕ್ಯಾಚ್ ದಿ ರೇನ್' ಅಭಿಯಾನಕ್ಕೆ ದೇಶಾದ್ಯಂತ ಉತ್ತಮ ಸ್ಪಂದನೆ ದೊರೆತಿರುವುದಕ್ಕೆ ಪ್ರಧಾನಿ ಸಂತಸ ವ್ಯಕ್ತಪಡಿಸಿದರು. ಜುಲೈ ೪ರಿಂದ ರಾಷ್ಟ್ರವ್ಯಾಪಿ ವಿಶೇಷ ಅಭಿಯಾನ ನಡೆಯುತ್ತಿದ್ದು, ಮಳೆನೀರು ಕೊಯ್ಲು, ಅಂತರ್ಜಲ ಮರುಪೂರಣ, ಹಳೆಯ ಜಲಮೂಲಗಳ ಪುನರುಜ್ಜೀವನ ಹಾಗೂ ವೃಕ್ಷಾರೋಪಣ ಕಾರ್ಯಗಳು

ವ್ಯಾಪಕವಾಗಿ ನಡೆಯುತ್ತಿದ್ದು, ಪ್ರತಿ ಹನಿ ನೀರನ್ನು ಉಳಿಸುವುದು ಮುಂದಿನ ಪೀಳಿಗೆಗೆ ಅಮೂಲ್ಯ ಆಸ್ತಿಯಾಗಲಿದೆ ಎಂದು ಹೇಳಿದರು.

ಧ್ವನಿ: ಪ್ರಧಾನಿ ( ೨೮ ಸೆಕೆಂಡ್ಸ್) ಕ್ಯಾಚ್ ದಿ ರೈನ್

ಗ್ಲಾಸ್ಗೋದಲ್ಲಿ ಆರಂಭವಾಗಿರುವ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಭಾಗವಹಿಸಿರುವ ಭಾರತೀಯ ಕ್ರೀಡಾಪಟುಗಳಿಗೆ ಪ್ರಧಾನಿ ಶುಭ ಹಾರೈಸಿದರು. ಜಪಾನ್ ಓಪನ್ ಬ್ಯಾಡ್ಮಿಂಟನ್ ಪ್ರಶಸ್ತಿ ಗೆದ್ದ ಮೊದಲ ಭಾರತೀಯ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾದ ಪಿ.ವಿ. ಸಿಂಧು ಅವರನ್ನು ಅಭಿನಂದಿಸಿದರು. ಲಂಡನ್‌ನ ಲಾರ್ಡ್ಸ್ ಕ್ರೀಡಾಂಗಣದಲ್ಲಿ ಐತಿಹಾಸಿಕ ಟೆಸ್ಟ್ ಪಂದ್ಯದಲ್ಲಿ ೨೬೦ ರನ್‌ಗಳ ಅಂತರದಿಂದ ಗೆಲುವು ಸಾಧಿಸಿದ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ಸಾಧನೆಯನ್ನು ಪ್ರಧಾನಿ ಶ್ಲಾಘಿಸಿದರು. ಭಾರತದ ಮೊದಲ ಖಾಸಗಿ ರಾಕೆಟ್ ವಿಕ್ರಮ್-೧೮ರ ಯಶಸ್ವಿ ಉಡಾವಣೆಯನ್ನು ದೇಶದ ಬಾಹ್ಯಾಕಾಶ ಕ್ಷೇತ್ರದ ಐತಿಹಾಸಿಕ ಸಾಧನೆ ಎಂದು ಬಣ್ಣಿಸಿದ ಪ್ರಧಾನಿ, ಖಾಸಗಿ ವಲಯಕ್ಕೆ ಅವಕಾಶ ನೀಡಿದ ಪರಿಣಾಮ ಯುವ ವಿಜ್ಞಾನಿಗಳು ಮತ್ತು ನವೋದ್ಯಮಿಗಳಿಗೆ ಹೊಸ ಅವಕಾಶಗಳು ದೊರೆತಿದ್ದು, ಅದರ ಫಲಿತಾಂಶವನ್ನು ಇಂದು ವಿಶ್ವವೇ ಗಮನಿಸುತ್ತಿದೆ ಎಂದು ಹೇಳಿದರು. ದೇಶದ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಸ್ಫೂರ್ತಿದಾಯಕ ಉಪಕ್ರಮಗಳನ್ನು ಉಲ್ಲೇಖಿಸಿದ ಪ್ರಧಾನಿ, 'ವೋಕಲ್ ಫಾರ್ ಲೋಕಲ್' ಅಭಿಯಾನವನ್ನು ಮತ್ತಷ್ಟು ಬಲಪಡಿಸುವಂತೆ ದೇಶವಾಸಿಗಳಿಗೆ ಕರೆ ನೀಡಿದರು. ಪ್ರಧಾನಮಂತ್ರಿಯವರು ಮನದ ಮಾತಿನಲ್ಲಿ ಮಾತನಾಡಿ, 'ತಾಯಿಯ ಹೆಸರಿನಲ್ಲಿ ಒಂದು ಸಸಿ' ಅಭಿಯಾನಕ್ಕೆ ದೇಶಾದ್ಯಂತ ದೊರೆತಿರುವ ಸ್ಪಂದನೆಗೆ ಸಂತಸ ವ್ಯಕ್ತಪಡಿಸಿದರು. ಅಹಮದಾಬಾದ್‌ನಲ್ಲಿ ಒಂದು ಗಂಟೆಯೊಳಗೆ ೩.೫ ಲಕ್ಷಕ್ಕೂ ಹೆಚ್ಚು ಸಸಿಗಳನ್ನು ನೆಟ್ಟು ಗಿನ್ನೆಸ್ ದಾಖಲೆ ನಿರ್ಮಿಸಿರುವುದನ್ನು ಅವರು ಉಲ್ಲೇಖಿಸಿದರು. ಪ್ಲಾಸ್ಟಿಕ್ ಮಾಲಿನ್ಯ ಜಾಗತಿಕ ಪರಿಸರಕ್ಕೆ ದೊಡ್ಡ ಸವಾಲಾಗಿದೆ ಎಂದು ಹೇಳಿದ ಪ್ರಧಾನಿ, ಬಿಹಾರದ ಸೀತಾಮಢಿಯಲ್ಲಿ ಏಕಬಳಕೆ ಪ್ಲಾಸ್ಟಿಕ್ ತ್ಯಾಜ್ಯವನ್ನು ಮರುಬಳಕೆ ಮಾಡಿ ಸಾರ್ವಜನಿಕ ಬಳಕೆಗೆ ಬೆಂಚುಗಳನ್ನು ತಯಾರಿಸುತ್ತಿರುವ ಉಪಕ್ರಮವನ್ನು ಮೆಚ್ಚಿದರು. 'ರಿಡ್ಯೂಸ್, ರಿಯೂಸ್, ರಿಸೈಕಲ್' ಪರಿಕಲ್ಪನೆಯನ್ನು ಜೀವನದ ಭಾಗವಾಗಿಸಿಕೊಳ್ಳುವಂತೆ ಪ್ರಧಾನಿ ಕರೆ ನೀಡಿದರು. ಮುಂಬರುವ ಗಣೇಶೋತ್ಸವವನ್ನು ಪರಿಸರ ಸ್ನೇಹಿಯಾಗಿ ಆಚರಿಸುವಂತೆ ಪ್ರಧಾನಿ ಮತ್ತೊಮ್ಮೆ ಮನವಿ ಮಾಡಿದರು. ಇದರಿಂದ ಪರಿಸರ ಸಂರಕ್ಷಣೆಗೂ ನೆರವಾಗುವುದರ ಜೊತೆಗೆ ಸ್ಥಳೀಯ ಕುಶಲಕರ್ಮಿಗಳಿಗೂ ಬೆಂಬಲ ದೊರೆಯುತ್ತದೆ ಎಂದು ಹೇಳಿದರು. ಆಗಸ್ಟ್ ೭ರಂದು ಆಚರಿಸಲಿರುವ ರಾಷ್ಟ್ರೀಯ ಕೈಮಗ್ಗ ದಿನದ ಅಂಗವಾಗಿ ದೇಶದ

ನೇಕಾರರಿಗೆ ಪ್ರಧಾನಿ ಶುಭಾಶಯ ಕೋರಿದರು. ಕೈಮಗ್ಗ ಉತ್ಪನ್ನಗಳು ಭಾರತದ ಸಾಂಸ್ಕೃತಿಕ ಪರಂಪರೆಯ ಪ್ರತೀಕವಾಗಿದ್ದು, ಪ್ರತಿಯೊಂದು ಉಡುಪಿನ ಹಿಂದೆ ಸಾವಿರಾರು ಕುಶಲಕರ್ಮಿಗಳ ಪರಿಶ್ರಮ ಅಡಗಿದೆ ಎಂದು ಹೇಳಿದರು. ನಾಳೆ ಭಾರತ ರತ್ನ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಪುಣ್ಯತಿಥಿ ಇರುವುದನ್ನು ಸ್ಮರಿಸಿದ ಪ್ರಧಾನಿ, ಕಲಾಂ ಅವರ ಜೀವನ ಯುವಜನತೆಗೆ ಸದಾ ಸ್ಫೂರ್ತಿಯಾಗಿದೆ ಎಂದು ಹೇಳಿದರು. ವಿಜ್ಞಾನಿಯಾಗಿ, ರಾಷ್ಟ್ರಪತಿಯಾಗಿ ಹಾಗೂ ಶಿಕ್ಷಕರಾಗಿ ಅವರು ನೀಡಿದ ಕೊಡುಗೆ ಅಪಾರವಾಗಿದೆ ಎಂದು ಪ್ರಧಾನಿ ಹೇಳಿದರು. ಈ ವಾರ ಆಚರಿಸಲಾಗುವ ಗುರು ಪೂರ್ಣಿಮೆ ಹಬ್ಬದ ಹಿನ್ನೆಲೆಯಲ್ಲಿ, ತಾಯಿ-ತಂದೆ, ಶಿಕ್ಷಕರು ಹಾಗೂ ಜೀವನದಲ್ಲಿ ಮಾರ್ಗದರ್ಶನ ನೀಡಿದ ಎಲ್ಲ ಗುರುಗಳಿಗೆ ಪ್ರಧಾನಿ ಗೌರವ ನಮನ ಸಲ್ಲಿಸಿದರು. ಮುಂಬರುವ ಸ್ವಾತಂತ್ರ್ಯ ದಿನಾಚರಣೆ ಕುರಿತು ಮಾತನಾಡಿದ ಪ್ರಧಾನಿ, ಆಗಸ್ಟ್ ೧೫ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಹೆಮ್ಮೆಯ ದಿನವಾಗಿದ್ದು, ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸುವ ಸಂದರ್ಭವಾಗಿದೆ ಎಂದು ಹೇಳಿದರು. ರಾಷ್ಟ್ರಧ್ವಜವು ದೇಶದ ಏಕತೆ, ಸ್ವಾತಂತ್ರ್ಯ ಹಾಗೂ ಸಂವಿಧಾನದ ಮೌಲ್ಯಗಳನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ತಿಳಿಸಿದರು. ಕಳೆದ ಕೆಲವು ವರ್ಷಗಳಿಂದ ದೇಶಾದ್ಯಂತ ಯಶಸ್ವಿಯಾಗಿ ನಡೆಯುತ್ತಿರುವ 'ಹರ್ ಘರ್ ತಿರಂಗಾ' ಅಭಿಯಾನವನ್ನು ಈ ವರ್ಷವೂ ಅದೇ ಉತ್ಸಾಹದಿಂದ ಆಚರಿಸುವಂತೆ ಪ್ರಧಾನಿ ಕರೆ ನೀಡಿದರು. ಪ್ರತಿಯೊಬ್ಬರೂ ತಮ್ಮ ಮನೆಗಳಲ್ಲಿ ಗೌರವಯುತವಾಗಿ ರಾಷ್ಟ್ರಧ್ವಜ ಹಾರಿಸಿ, ಸ್ವಾತಂತ್ರ್ಯದ ಸಂಭ್ರಮದಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು.

<><><><>

ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸಿದ್ದ ಭೂಕುಸಿತ ತೆರವುಗೊಂಡ ಬಳಿಕ, ಅಮರನಾಥ ಯಾತ್ರೆಯ ೧೯ನೇ ತಂಡದ ೪ ಸಾವಿರದ ೪೭೪ ಯಾತ್ರಾರ್ಥಿಗಳು ಇಂದು ಮುಂಜಾನೆ ಜಮ್ಮುವಿನ ಮೂಲ ಶಿಬಿರದಿಂದ ಪವಿತ್ರ ಯಾತ್ರೆಗೆ ತೆರಳಿದ್ದಾರೆ. ಅಧಿಕಾರಿಗಳ ಪ್ರಕಾರ, ಬಿಗಿ ಭದ್ರತೆಯ ನಡುವೆ ೧೬೬ ವಾಹನಗಳ ಬೆಂಗಾವಲಿನಲ್ಲಿ ಯಾತ್ರಾರ್ಥಿಗಳು ಇಂದು ಬೆಳಿಗ್ಗೆ ೨ ಗಂಟೆ ೪೦ ನಿಮಿಷಕ್ಕೆ ಗಂದೇರ್‌ಬಲ್ ಜಿಲ್ಲೆಯ ಬಾಲ್ತಾಲ್ ಮೂಲ ಶಿಬಿರದತ್ತ ಪ್ರಯಾಣ ಬೆಳೆಸಿದರು. ೫೭ ದಿನಗಳ ಅಮರನಾಥ ಯಾತ್ರೆ ಸುಗಮವಾಗಿ ಸಾಗುತ್ತಿದ್ದು, ಜುಲೈ ೩ರಂದು ಯಾತ್ರೆ ಆರಂಭವಾದ ಬಳಿಕ ಸಮುದ್ರಮಟ್ಟದಿಂದ ೩ ಸಾವಿರದ ೮೮೦ ಮೀಟರ್ ಎತ್ತರದಲ್ಲಿರುವ ಪವಿತ್ರ ಗುಹಾ ದೇಗುಲಕ್ಕೆ ಇದುವರೆಗೆ ೪ ಲಕ್ಷಕ್ಕೂ ಹೆಚ್ಚು ಭಕ್ತರು ಭೇಟಿ ನೀಡಿದ್ದಾರೆ ಎಂದು

ಅಧಿಕಾರಿಗಳು ತಿಳಿಸಿದ್ದಾರೆ. ಆಗಸ್ಟ್ ೨೮ರ ರಕ್ಷಾ ಬಂಧನ ದಿನದಂದು ಅಮರನಾಥ ಯಾತ್ರೆ ಸಮಾಪ್ತಿಗೊಳ್ಳಲಿದೆ.

<><><><>

ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ತಿದ್ದುಪಡಿ ಮಸೂದೆ-೨೦೨೬ ರನ್ನು ಕೇಂದ್ರ ಸರ್ಕಾರ ನಾಳೆ ಲೋಕಸಭೆಯಲ್ಲಿ ಮಂಡಿಸಲಿದೆ. ೨೦೨೪ರ ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ಕಾಯ್ದೆಗೆ ತಿದ್ದುಪಡಿ ತರಲು ಈ ಮಸೂದೆ ಉದ್ದೇಶಿಸಿದ್ದು, ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಮಸೂದೆಯನ್ನು ಮಂಡಿಸಲಿದ್ದಾರೆ. ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮ ಪ್ರಕರಣಗಳಲ್ಲಿ ತ್ವರಿತ ನ್ಯಾಯಾಲಯಗಳ ಸ್ಥಾಪನೆ ಮತ್ತು ಕಠಿಣ ಶಿಕ್ಷೆ ವಿಧಿಸುವ ಸಂಬಂಧದ ಕರಡು ಮಸೂದೆಗೆ ಕೇಂದ್ರ ಸಚಿವ ಸಂಪುಟ ಶುಕ್ರವಾರ ಅನುಮೋದನೆ ನೀಡಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>